2295
24/09/15

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಮೆ: ಆರ್.ಎನ್.ಎಸ್., ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ಕಂಪನಿಯವರಿಗೆ 9 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರವನ್ನು ಸ್ಥಾಪಿಸಲು ನಿರಾಕ್ಷೇಪಣೆ ನೀಡುವ ಕುರಿತು.

**ಓದಲಾಗಿದೆ:** ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ದಿನಾಂಕ: 01.09.2015 ರಂದು ಏಕ ಕಡತ ಪದ್ಧತಿಯಡಿ ಸಲ್ಲಿಸಿರುವ ಕಡತ.

* * *

**ಪ್ರಸ್ತಾವನೆ :-**

ಮೆ: ಆರ್.ಎನ್.ಎಸ್., ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ಕಂಪನಿಯವರು ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ನಾಗಲಮಡಿಕೆ ಹೋಬಳಿಯ ವಡ್ರೇವು ಗ್ರಾಮದ ಸರ್ವೆ ನಂ. 28, 29/2, 40/1, 40/2, 40/3, 40/4, 40/5, ಮತ್ತು 40/10 ಜಾಗದಲ್ಲಿ 9 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರನ್ನು IPP Category for Third Party Sale ಅಡಿ ಸ್ಥಾಪಿಸಲು ಪಿ.ಎಫ್.ಆರ್.ಪಿ. ಯೊಂದಿಗೆ ಕಂಪನಿಯ ನೆಟ್‌ವರ್ತ್ ರೂ. 154.52 ಕೋಟಿಗಳ ವಿವರಗಳನ್ನು, ಕಂಪನಿಯ MOA ಮತ್ತು AOA ಪ್ರತಿಗಳನ್ನು, ಉದ್ದೇಶಿತ ಯೋಜನೆಯ ಸ್ಥಳ ವಿವರಗಳನ್ನು ಮತ್ತು ಇತರ ವಿವರಗಳನ್ನು ಚೆಕ್‌ಲಿಸ್ಟ್‌ನೊಂದಿಗೆ ಪ್ರಸ್ತಾವನೆ ಸಲ್ಲಿಸಿದ್ದು, ಉದ್ದೇಶಿತ 9 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರವನ್ನು ಸ್ಥಾಪಿಸಲು ಅನುಮೋದನೆ ನೀಡಬಹುದೆಂಬ ಶಿಫಾರಸ್ಸಿನೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕ್ರೆಡೆಲ್ ರವರು ಏಕ ಕಡತ ಪದ್ಧತಿಯಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಗಿನಂತೆ ಆದೇಶಿಸಲಾಗಿದೆ: -

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 196 ಎನ್‌ಸಿಇ 2015,**
**ಬೆಂಗಳೂರು, ದಿನಾಂಕ: 10.09.2015**

MD KREDL 24/9/15 GM

ಮೆ: ಆರ್.ಎನ್.ಎಸ್., ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ಕಂಪನಿಯವರು ತುಮಕೂರು ಜಿಲ್ಲೆಯ ಪಾವಗಡ ತಾಲ್ಲೂಕಿನ ನಾಗಲಮಡಿಕೆ ಹೋಬಳಿಯ ವಡ್ರೇವು ಗ್ರಾಮದ ಸರ್ವೆ ನಂ. 28, 29/2, 40/1, 40/2, 40/3, 40/4, 40/5, ಮತ್ತು 40/10 ಜಾಗದಲ್ಲಿ 9 ಮೆ.ವ್ಯಾ. ಸಾಮರ್ಥ್ಯದ ಸೌರ ವಿದ್ಯುತ್ ಸ್ಥಾವರನ್ನು IPP Category for Third Party Sale ಅಡಿ ಸ್ಥಾಪಿಸಲು ಈ ಕೆಳಕಂಡ ಷರತ್ತಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿದೆ.

1. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ / ಸಂಸ್ಥೆಗಳ ಅನುಮೋದನೆ ಪಡೆದುಕೊಳ್ಳತಕ್ಕದ್ದು;
2. ಮೆ: ಆರ್.ಎನ್.ಎಸ್., ಇನ್ಫ್ರಾಸ್ಟ್ರಕ್ಚರ್ ಲಿಮಿಟೆಡ್ ರವರು ಸೌರ ನೀತಿ 2014-21 ರನ್ವಯ ಈ ಬಾಬ್ತು ನಿಗದಿತ ಶುಲ್ಕ ಮತ್ತು ಬ್ಯಾಂಕ್ ಗ್ಯಾರಂಟಿಯನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.
3. ಯೋಜನೆಯಿಂದ ಉತ್ಪತ್ತಿಯಾಗುವ ವಿದ್ಯುತ್ತನ್ನು ಕೆ.ಇ.ಆರ್.ಸಿ.ಯ ನಿಯಮಗಳನ್ವಯ ಅಭಿವೃದ್ಧಿದಾರರು ಸ್ವಂತಕ್ಕೆ ಬಳಸಿಕೊಳ್ಳಲು ಅಥವಾ ಮೂರನೆಯ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ.

RNS file

---2)

4. ಈ ಪ್ರಸ್ತಾವನೆಯನ್ನು ಮುಂದಿನ ಹಂಚಿಕೆ ಸಮಿತಿಯ ಸಭೆಯಲ್ಲಿ ಮಂಡಿಸಿ ಘಟನೋತ್ತರವಾಗಿ ಸ್ಥಿರೀಕರಿಸಿಕೊಳ್ಳುವ/ಅನುಮೋದಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

ಈ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ.

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.
☏ 22034674.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ:**

1. ಸರ್ಕಾರದ ಅರಪ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ/ ವಿಕಾಸ ಸೌಧ, ಬೆಂಗಳೂರು-1.
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ನಿಗಮ ನಿಯಮಿತ, ನಂ.82, ಶಕ್ತಿ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು-560 001.
4. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
6. ಜಿಲ್ಲಾಧಿಕಾರಿಗಳು, ತುಮಕೂರು ಜಿಲ್ಲೆ, ತುಮಕೂರು.
7. ಉಪ ಅರಣ್ಯ ಸಂರಕ್ಷಣಾಧಿಕಾರಿ ತುಮಕೂರು ಜಿಲ್ಲೆ, ತುಮಕೂರು.
8. ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು.
9. M/s RNS Infrastructure Limited Naveen Complex, 7th floor, M.G.Road, Bengaluru-560 001.
10. ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13. ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.